ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

13

ಇಲಾಖೆ / ವಿಷಯ : DEPARTMENT / SUBJECT: ಪ್ರವಾಸೋದ್ಯಮ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 1/1/2021

ಪ್ರವಾಸೋದ್ಯಮ ಉತ್ತೇಜಿಸಲು ಇಲಾಖೆಯಿಂದ ಸುತ್ತೋಲೆ

# ಹೋಟೆಲ್‌ಗಳಲ್ಲಿ ಮಾರ್ಗಸೂಚಿ ಪಾಲನೆ ಕಡ್ಡಾಯ

■ ವಿಕ ಸುದ್ದಿಲೋಕ ಬೆಂಗಳೂರು 1/1/21

ಪ್ರವಾಸೋದ್ಯಮವನ್ನು ಹಂತ ಹಂತವಾಗಿ ಉತ್ತೇಜಿಸುವ ಸಲುವಾಗಿ ಹಾಗೂ ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿರುವ ಹೋಟೆಲ್ ಮತ್ತು ರೆಸಾರ್ಟ್‌ಗಳಲ್ಲಿ ಕಾನೂನು ಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಕೆಲ ಮಾರ್ಗಸೂಚಿಗಳನ್ನು ಪಾಲಿಸುವಂತೆ ಪ್ರವಾಸೋದ್ಯಮ ಇಲಾಖೆ ಸುತ್ತೋಲೆ ಹೊರಡಿಸಿದೆ.

**ನಿಯಮ ಉಲ್ಲಂಘಿಸಿದರೆ ಕಾನೂನು ಕ್ರಮದ ಎಚ್ಚರಿಕೆ**

- ಸ್ಥಳೀಯ ಪೊಲೀಸ್ ಠಾಣೆಯಿಂದ, ಸ್ಥಳೀಯ ಬಿಬಿಎಂಪಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪತ್ರವನ್ನು ಕಡ್ಡಾಯವಾಗಿ ಹೊಂದಿರಬೇಕು.
- ಕರ್ನಾಟಕ ವಾಯು ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮತಿ ಪತ್ರ ಪಡೆದಿರಬೇಕು.
- ಆಹಾರ ಸುರಕ್ಷತೆ ಗುಣಮಟ್ಟ ಪ್ರಾಧಿಕಾರದಿಂದ ಅನುಮತಿ ಪತ್ರ ಪಡೆದಿರಬೇಕು.
- ಅಗ್ನಿ ಅನಾಹುತಗಳಿಗೆ ಸಂಬಂಧಿಸಿದಂತೆ



ಮುಂಜಾಗ್ರತೆ ಕ್ರಮಗಳನ್ನು ತೆಗೆದುಕೊಳ್ಳಬೇಕು.
- ಎಕೋ-ಸೆನ್ಸಿಟೀವ್ ಝೋನ್ ವ್ಯಾಪ್ತಿಗೆ ಅಥವಾ ಒಳಪಡದಿರುವ ಬಗ್ಗೆ ಅರಣ್ಯ ಇಲಾಖೆಯಿಂದ ಅನುಮತಿ ಪತ್ರ ಪಡೆದಿರಬೇಕು.
- ಅಬಕಾರಿ ಇಲಾಖೆಯಿಂದ ಪರವಾನಗಿ ಪತ್ರ ಪಡೆದಿರಬೇಕು.
- ವಾಣಿಜ್ಯ ತೆರಿಗೆ ಇಲಾಖೆಯಿಂದ ನೋಂದಣಿಯಾಗಿರುವ ಜಿಎಸ್‌ಟಿ ಪ್ರಮಾಣ ಪತ್ರ ಪಡೆದಿರಬೇಕು.
- ಬೆಂಗಳೂರಿನ ರಾಷ್ಟ್ರೀಯ ಸಾಹಸ ಅಕಾಡೆಮಿಯಿಂದ ಅನುಮತಿ ಪತ್ರ ಪಡೆದಿರಬೇಕು.
- ಪ್ರವಾಸಿಗರ ಸುರಕ್ಷತೆಗೆ ಕ್ರಮ ಕೈಗೊಳ್ಳುವುದು.
- ಮಾಸಿಕ ಪ್ರವಾಸಿಗರ ಅಂಕಿ- ಅಂಶಗಳನ್ನು ಸಂಗ್ರಹಿಸಿ ಇಲಾಖೆಗೆ ತಪ್ಪದೆ ಸಲ್ಲಿಸುವುದು.
- ವಾಸ್ತವ್ಯ ಹಾಗೂ ಪ್ರವೇಶಕ್ಕೆ ನಿಗದಿಪಡಿಸಿರುವ ದರಪಟ್ಟಿಯನ್ನು ಪ್ರದರ್ಶಿಸಿರುವ ಬಗ್ಗೆ ಇಲಾಖೆಗೆ ದಾಖಲೆ ಸಲ್ಲಿಸುವುದು.
- ಕೋವಿಡ್-19 ತಡೆಗಟ್ಟುವ ಮುಂಜಾಗ್ರತೆ ಕ್ರಮ ಕೈಗೊಳ್ಳುವುದು ಹಾಗೂ ಕೋವಿಡ್ ಜಾಗೃತಿಗಾಗಿ ಹೋಟೆಲ್ ಮತ್ತು ರೆಸಾರ್ಟ್‌ಗಳ ಒಳಭಾಗ, ಮುಂಭಾಗದಲ್ಲಿ ಪೋಸ್ಟರ್ ಹಾಕುವುದು.

ಹೋಟೆಲ್ ಹಾಗೂ ರೆಸಾರ್ಟ್‌ಗಳ ಮಾಲೀಕರು ಈ ಎಲ್ಲ ಸೂಚನೆಗಳನ್ನು ಪಾಲಿಸುವ ಬಗ್ಗೆ ಪತ್ರ ತಲುಪಿದ 15 ದಿನಗೊಳೊಳಗೆ ಸೂಕ್ತ ದಾಖಲೆಗಳನ್ನು ನಿರ್ದೇಶಕರ ಕಚೇರಿ, ಬೆಂಗಳೂರು ವಿಭಾಗ, ಮೈಸೂರು ಷುಗರ್ ಕಂಪನಿ ಲಿಮಿಟೆಡ್ ಕಟ್ಟಡ, 1ನೇ ಮಹಡಿ, ಜೆಸಿ ರಸ್ತೆ ಇಲ್ಲಿಗೆ ತಲುಪಿಸುವುದು. ಇಲ್ಲದಿದ್ದಲ್ಲಿ ಅನುಮತಿ ಪಡೆಯುವವರೆಗೂ ತಮ್ಮ ವ್ಯವಹಾರ ಸ್ಥಗಿತಗೊಳಿಸುವಂತೆ ಸೂಚಿಸಿದೆ. ಒಂದು ವೇಳೆ ನಿಯಮ ಉಲ್ಲಂಘಿಸಿದರೆ ಸೂಕ್ತ ಕಾನೂನು ಕ್ರಮ ಜರುಗಿಸುವುದಾಗಿ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಅಧ್ಯಕ್ಷರು ತಿಳಿಸಿದ್ದಾರೆ.